**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹುಣಸೂರು**

**ಸಿಸಿ ನಂ.290/2024**

**ಫಿರ್ಯಾದುದಾರರುಃ** ಆರ್.ನಾರಾಯಣ, ಬಿನ್ ಹೆಚ್.ಎಂ.ರಾಮಣ್ಣ, ವಯಸ್ಸು 53 ವರ್ಷ, ವಾಸಃ ಕರೀಗೌಡ ಸ್ಟ್ರೀಟ್, ಹುಣಸೂರು ಟೌನ್, ಮೈಸೂರು ಜಿಲ್ಲೆ.

**– ವಿರುದ್ಧ –**

**ಆರೋಪಿಃ** ಬಿ.ಪ್ರಸಾದ್, ಬಿನ್ ಬೊಮ್ಮೇಗೌಡ, ವಯಸ್ಸು 45ವರ್ಷ, ವಾಸಃ ನಂ.95, ಇಂಡೇನ್ ಗ್ಯಾಸ್ ಎದುರು, ಮಂಜುನಾಥ ಲೇಔಟ್, ಹುಣಸೂರು ಟೌನ್, ಮೈಸೂರು ಜಿಲ್ಲೆ.

**ದಂಡ ಪ್ರಕ್ರಿಯಾ ಸಂಹಿತೆಯ ಕಲಂ 313 ರ ಅಡಿಯಲ್ಲಿ ಆರೋಪಿಯ ಹೇಳಿಕೆ**

| | |
|---|---|
| ಪ್ರಶ್ನೆ 1: | ಫಿರ್ಯಾದುದಾರರಾದ ಆರ್.ನಾರಾಯಣ ರವರು ನಿಮ್ಮ ವಿರುದ್ಧ ಕೊಟ್ಟಿರುವ ಹೇಳಿಕೆಗಳನ್ನು ಕೇಳಿದ್ದೀರಾ? |
| ಉತ್ತರ: | ತಿಳಿಯಿತು |
| ಪ್ರಶ್ನೆ 2: | ಪಿ.ಡಬ್ಲ್ಯೂ1 ಆರ್.ನಾರಾಯಣ ರವರು ತಮ್ಮ ಸಾಕ್ಷ್ಯದಲ್ಲಿ, ಆರೋಪಿಯಾದ ನೀವು ವ್ಯಾಪಾರಸ್ಥರು ಮತ್ತು ಹುಣಸೂರು ಟೌನ್ ನಲ್ಲಿ ಭೂ ಅಭಿವೃದ್ಧಿಕಾರರಾಗಿದ್ದು, ನೀವು ಮತ್ತು ಅವರು 20 ವರ್ಷಗಳಿಂದ ಪರಿಚಯಸ್ಥರು ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಹೌದು |

| | |
|---|---|
| ಪ್ರಶ್ನೆ 3: | ಇದೇ ಸಾಕ್ಷಿಯು ಮುಂದುವರಿದು ತಮ್ಮ ಸಾಕ್ಷ್ಯದಲ್ಲಿ, ಸದರಿ ಪರಿಚಯದ ಆಧಾರದ ಮೇಲೆ ನೀವು 05.02.2024ರಲ್ಲಿ ಅವರಿಂದ ಶುಂಠಿ ವ್ಯಾಪಾರಕ್ಕಾಗಿ ರೂ.7,00,000/- ಗಳ ಕೈ ಸಾಲವನ್ನು ವೆಂಕಟೇಶ, ಬಿನ್ ಸಣ್ಣೇಗೌಡ ಇವರ ಉಪಸ್ಥಿತಿಯಲ್ಲಿ 1% ಬಡ್ಡಿಯೊಂದಿಗೆ ಒಂದು ತಿಂಗಳ ಒಳಗೆ ಮರುಪಾವತಿಸುವುದಾಗಿ ಹೇಳಿ ಸಾಲವಾಗಿ ಪಡೆದುಕೊಂಡಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಹೌದು |
| ಪ್ರಶ್ನೆ:4 | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ನೀವು ಮೇಲೆ ತಿಳಿಸಿದ ಸಾಲದ ಮೊತ್ತವನ್ನು ಮರುಪಾವತಿಸಲು ದಿನಾಂಕಃ 06.03.2024ರಂದು ಸ್ವಯಂಪ್ರೇರಣೆಯಿಂದ 29.04.2024ರ ದಿನಾಂಕ ನಮೂದಿಸಿ ಕರ್ನಾಟಕ ಬ್ಯಾಂಕ್ ಲಿಮಿಟೆಡ್, ಹುಣಸೂರು ಶಾಖೆಯ ಚೆಕ್ ಸಂಖ್ಯೆಃ 653707 ನ್ನು ರೂ.7,00,000/-ಗಳಿಗೆ ಫಿರ್ಯಾದಿದಾರರಿಗೆ ನೀಡಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 5: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಸದರಿ ಚೆಕ್ ಅನ್ನು ಅವರು ತಮ್ಮ ಬ್ಯಾಂಕ್ ಆದ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಎಸ್.ಜೆ.ರಸ್ತೆ, ಹುಣಸೂರು ಶಾಖೆಯ ಮೂಲಕ ದಿನಾಂಕಃ 29.04.2024 ನಗದೀಕರಣಕ್ಕಾಗಿ ಹಾಜರುಪಡಿಸಿದಾಗ "ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣ ಇಲ್ಲ" ಎಂಬ ಕಾರಣಕ್ಕೆ ಸದರಿ ಚೆಕ್ ದಿನಾಂಕಃ 04.05.2024 ರಂದು ಬ್ಯಾಂಕಿನ ಹಿಂಬರಹದೊಂದಿಗೆ ವಾಪಾಸಾಗಿರುವುದಾಗಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |

| | |
|---|---|
| ಉತ್ತರ: | ಸುಳ್ಳು |
| ಪ್ರಶ್ನೆ 6: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಈ ಬಗ್ಗೆ ದಿನಾಂಕ 09.05.2024 ರಂದು ಅವರು ನಿಮಗೆ ತಮ್ಮ ವಕೀಲರ ಮೂಲಕ ನೊಂದಾಯಿತ ಅಂಚೆಯ ಮೂಲಕ ನೋಟೀಸನ್ನು ನೀಡಿದ್ದು, ಸದರಿ ನೋಟೀಸ್ ನ್ನು ನೀವು ಉದ್ದೇಶಪೂರ್ವಕವಾಗಿ ತಿರಸ್ಕರಿಸಿ ವಾಪಾಸ್ ಆಗಿದ್ದು, ಈ ಬಗ್ಗೆ ನಿಮಗೆ ಮಾಹಿತಿ ಇದ್ದರೂ ಸಹ ನೀವು ಫಿರ್ಯಾದುದಾರರಿಗೆ ನೀಡಬೇಕಾದ ಚೆಕ್ಕಿನ ಹಣವನ್ನು ಉದ್ದೇಶಪೂರ್ವಕವಾಗಿ ಮರುಪಾವತಿಸಿಲ್ಲ ಹಾಗು ನೋಟೀಸಿಗೆ ಉತ್ತರವನ್ನು ನೀಡಿರುವುದಿಲ್ಲ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 7: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಆದರೂ ಸಹ ನೀವು ಈವರೆಗೂ ಸಾಲದ ಹಣವನ್ನು ಮರುಪಾವತಿಸದೆ ಇರುವುದರಿಂದ ನೆಗೋಶಿಯೇಬಲ್ ಇನ್ಸ್ಟುಮೆಂಟ್ಸ್ ಕಾಯಿದೆಯ ಕಲಂ 138ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧ ಎಸಗಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 8: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ ನೀವು ಅವರಿಗೆ ನೀಡಿದ ಚೆಕ್, ಬ್ಯಾಂಕಿನವರು ನೀಡಿದ ಹಿಂಬರಹ, ವಕೀಲರ ಮೂಲಕ ನೀಡಿದ ನೋಟೀಸಿನ ಕಚೇರಿ ಪ್ರತಿ, ಅಂಚೆ ರಶೀದಿ ಮತ್ತು ಅಂಚೆ ಸ್ವೀಕೃತಿ ಪತ್ರ ಮತ್ತು ಚೆಕ್ ಡೆಪಾಸಿಟ್ ನಿಪಿ-1 ರಿಂದ ನಿಪಿ-6 ಎಂದು ಗುರುತಿಸಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |

| | |
|---|---|
| ಪ್ರಶ್ನೆ 9: | ನಿಮಗೆ ಈ ಕೇಸಿನ ಬಗ್ಗೆ ಮತ್ತೆ ಏನಾದರೂ ಹೇಳುವುದು ಇದೆಯೇ? |
| ಉತ್ತರ: | ಇದೆ |
| ಪ್ರಶ್ನೆ 10: | ನಿಮ್ಮ ಪರವಾಗಿ ಸಾಕ್ಷಿ ವಿಚಾರಣೆ ಇದೆಯೇ? |
| ಉತ್ತರ: | ಇದೆ |

ಈ ಮೇಲ್ಕಂಡ ಹೇಳಿಕೆಯನ್ನು ನಾನೇ ಸ್ವತಃ ಆರೋಪಿಗೆ ಓದಿ ಹೇಳಿ, ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ಬರೆದುಕೊಂಡಿದ್ದು, ಮೇಲೆ ಹೇಳಿರುವುದು ಸತ್ಯ ಮತ್ತು ಸರಿಯಾಗಿದೆಯೆಂದು ದೃಢೀಕರಿಸಿರುತ್ತೇನೆ.

ದಿನಾಂಕಃ 20.08.2025.

Sd/-

(ಅನಿತ)

ANITHA Digitally signed by ANITHA Date: 2025.08.20 18:24:03 +0530

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ.ದ.ನ್ಯಾದಂ., ಹುಣಸೂರು.**

ಆರೋಪಿಯ ಸಹಿಃ